All India Radio: Bangalore
National Bulletin In Kannada
13.10.2025 7.35 p.m.

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

13.10.2025 7.35 p.m.

<><><><>

**ಮುಖ್ಯಾಂಶಗಳು**

೧. ಕೆನಡಾ ವಿದೇಶಾಂಗ ಸಚಿವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ ; ಉಭಯ ದೇಶಗಳ ಪಾಲುದಾರಿಕೆ ಬಲಗೊಳಿಸುವ ನಿಟ್ಟಿನಲ್ಲಿ ಚರ್ಚೆ

೨. ಮೂವರು ಅರ್ಥಶಾಸ್ತ್ರಜ್ಞರಿಗೆ ೨೦೨೫ನೇ ಸಾಲಿನ ಅರ್ಥಶಾಸ್ತ್ರ ನೊಬೆಲ್ ಪ್ರಶಸ್ತಿ

೩. ನಾಲ್ಕು ದಿನಗಳ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿದ ಮಂಗೋಲಿಯಾ ಅಧ್ಯಕ್ಷ

೪. ಟೆಸ್ಟ್ ಕ್ರಿಕೆಟ್; ವೆಸ್ಟ್ ಇಂಡೀಸ್ ವಿರುದ್ಧ ಸರಣಿ ಗೆಲುವಿನ ಸನಿಹದಲ್ಲಿ ಭಾರತ

**************

ಕೆನಡಾದ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರು ಇಂದು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದರು. ಅನಿತಾ ಆನಂದ್ ಅವರನ್ನು ಸ್ವಾಗತಿಸಿದ ಪ್ರಧಾನಿ ಮೋದಿ, ಭಾರತ-ಕೆನಡಾ ದ್ವಿಪಕ್ಷೀಯ ಪಾಲುದಾರಿಕೆಗೆ ಹೊಸ ವೇಗವನ್ನು ನೀಡುವ ನಿರಂತರ ಪ್ರಯತ್ನಗಳಿಗೆ ಅವರ ಭೇಟಿ ಕೊಡುಗೆ ನೀಡುತ್ತದೆ ಎಂದು ಹೇಳಿದರು. ಈ ವರ್ಷದ ಜೂನ್‌ನಲ್ಲಿ ಜಿ-೭ ಶೃಂಗಸಭೆಗಾಗಿ ಕೆನಡಾಕ್ಕೆ ಭೇಟಿ ನೀಡಿದ್ದನ್ನು ಪ್ರಧಾನಿ ನೆನಪಿಸಿಕೊಂಡರು. ಈ

ಸಂದರ್ಭದಲ್ಲಿ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಅವರೊಂದಿಗೆ ಅತ್ಯಂತ ಉತ್ಪಾದಕ ಸಭೆ ನಡೆಸಿದ್ದರು. ಇದೇ ವೇಳೆ ವ್ಯಾಪಾರ, ಇಂಧನ, ತಂತ್ರಜ್ಞಾನ, ಕೃಷಿ ಮತ್ತು ಜನರಿಂದ ಜನರಿಗೆ ಸಂಬಂಧಗಳಲ್ಲಿ ಎರಡೂ ದೇಶಗಳ ನಡುವಿನ ವರ್ಧಿತ ಸಹಕಾರದ ಮಹತ್ವವನ್ನು ಪ್ರಧಾನಿ ನರೇಂದ್ರ ಮೋದಿ ಒತ್ತಿ ಹೇಳಿದರು.

**************

೨೦೨೫ ಸಾಲಿನ ಅರ್ಥಶಾಸ್ತ್ರ ನೊಬೆಲ್ ಪ್ರಶಸ್ತಿಗೆ ಜೋಯಲ್ ಮೊಕಿರ್, ಫಿಲಿಪ್ ಅಘಿಯಾನ್ ಮತ್ತು ಪೀಟರ್ ಹೋವಿಟ್ ಭಾಜನರಾಗಿದ್ದಾರೆ. ನಾವೀನ್ಯತೆ ಮತ್ತು ಆರ್ಥಿಕ ಬೆಳವಣಿಗೆಯ ಕುರಿತಾದ ಅತ್ಯುತ್ತಮ ಕೆಲಸಕ್ಕಾಗಿ ಈ ಮೂವರು ಸಾಧಕರು ನೊಬೆಲ್ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ನೊಬೆಲ್ ಸಮಿತಿಯ ಪ್ರಕಾರ, ನಾವೀನ್ಯತೆ-ಚಾಲಿತ ಆರ್ಥಿಕ ಬೆಳವಣಿಗೆಯನ್ನು ವಿವರಿಸಿದ್ದಕ್ಕಾಗಿ ಈ ಮೂವರು ಅರ್ಥಶಾಸ್ತ್ರಜ್ಞರನ್ನು ಗುರುತಿಸಲಾಗಿದೆ.

**************

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಇಂದು ಕಾರ್ಡಿಯೋಪಲ್ಮನರಿ ರಿಸಸಿಟೇಶನ್ ಜಾಗೃತಿ ಸಪ್ತಾಹಕ್ಕೆ ಚಾಲನೆ ನೀಡಿದೆ. ಈ ಅಭಿಯಾನ ಈ ತಿಂಗಳ ೧೭ ರಂದು ಮುಕ್ತಾಯಗೊಳ್ಳಲಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ, ಸಿಪಿಆರ್ ಜಾಗೃತಿ ಸಪ್ತಾಹದ ಅಡಿಯಲ್ಲಿ ಪ್ರತಿ ಮನೆ, ಶಾಲೆ, ಕಚೇರಿ ಮತ್ತು ಸಾರ್ವಜನಿಕ ಸ್ಥಳದಲ್ಲಿ ಜೀವ ಉಳಿಸುವ ತಂತ್ರದಲ್ಲಿ ಕನಿಷ್ಠ ಒಬ್ಬ ವ್ಯಕ್ತಿ ತರಬೇತಿ ಪಡೆದಿರುವುದನ್ನು ಖಚಿತಪಡಿಸಿಕೊಳ್ಳುವ ಕೇಂದ್ರ ಸರ್ಕಾರದ ದೃಷ್ಟಿಕೋನವನ್ನು ಅವರು ಒತ್ತಿ ಹೇಳಿದರು.

**************

ದೇಶದ ಚಿಲ್ಲರೆ ಹಣದುಬ್ಬರವು ಈ ವರ್ಷದ ಸೆಪ್ಟೆಂಬರ್‌ನಲ್ಲಿ ಎಂಟು ವರ್ಷಗಳ ಕನಿಷ್ಠ ಮಟ್ಟವಾದ ಶೇಕಡ ೧.೫೪ ಕ್ಕೆ ಇಳಿದಿದೆ. ಇದು ೨೦೨೫ ರ ಆಗಸ್ಟ್‌ನಲ್ಲಿ ದಾಖಲಾದ ಶೇಕಡ ೨.೦೭ ಕ್ಕಿಂತ ಕಡಿಮೆಯಾಗಿದೆ. ಕೇಂದ್ರ ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, ೨೦೧೭ ರ ಜೂನ್ ನಂತರ ಇದು ವರ್ಷದಿಂದ ವರ್ಷಕ್ಕೆ ಅತ್ಯಂತ ಕಡಿಮೆ ಹಣದುಬ್ಬರ ದರವಾಗಿದೆ. ಏತನ್ಮಧ್ಯೆ, ಗ್ರಾಮೀಣ ಪ್ರದೇಶಗಳಲ್ಲಿ ಹಣದುಬ್ಬರವು ಶೇಕಡ ೧.೦೭ ಕ್ಕೆ ಮತ್ತು ನಗರ ಪ್ರದೇಶಗಳಲ್ಲಿ ಶೇಕಡ ೨.೦೪ ಕ್ಕೆ ಇಳಿದಿದೆ.

ನಾಲ್ಕು ದಿನಗಳ ಭಾರತ ಭೇಟಿಗಾಗಿ ಮಂಗೋಲಿಯಾ ಅಧ್ಯಕ್ಷ ಖುರೇಲ್‌ಸುಖ್ ಉಖ್ನಾ ನವದೆಹಲಿಗೆ ಆಗಮಿಸಿದ್ದಾರೆ. ವಿಮಾನ ನಿಲ್ದಾಣದಲ್ಲಿ ಅವರನ್ನು ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ್ ಮೊಹೋಲ್ ಬರಮಾಡಿಕೊಂಡರು. ಮಂಗೋಲಿಯಾದ ಅಧ್ಯಕ್ಷರೊಂದಿಗೆ ಸಂಪುಟ ಸಚಿವರು, ಸಂಸತ್ ಸದಸ್ಯರು, ಹಿರಿಯ ಅಧಿಕಾರಿಗಳು, ಉದ್ಯಮಿಗಳು ಮತ್ತು ಸಾಂಸ್ಕೃತಿಕ ಪ್ರತಿನಿಧಿಗಳನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗವಿದೆ. ಮಂಗೋಲಿಯಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಖುರೇಲ್‌ಸುಖ್ ಅವರ ಮೊದಲ ಭಾರತ ಭೇಟಿ ಇದಾಗಿದೆ. ಭೇಟಿಯ ಸಮಯದಲ್ಲಿ, ಮಂಗೋಲಿಯನ್ ಅಧ್ಯಕ್ಷರು, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಲಿದ್ದಾರೆ.

**************

ಯೋಜನೆ ಮತ್ತು ಅನುಷ್ಠಾನದ ನಡುವೆ ಸೇತುವೆಯಾಗಿ ಪ್ರಧಾನ ಮಂತ್ರಿ ಗತಿಶಕ್ತಿ ಉಪಕ್ರಮ ಕಾರ್ಯನಿರ್ವಹಿಸಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಪ್ರಧಾನ ಮಂತ್ರಿ

ಗತಿಶಕ್ತಿ ರಾಷ್ಟ್ರೀಯ ಮಾಸ್ಟರ್ ಪ್ಲಾನ್‌ನ ೪ನೇ ವಾರ್ಷಿಕೋತ್ಸವ ಉದ್ದೇಶಿಸಿ ಮಾತನಾಡಿದ ಸಚಿವರು, ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಮಗ್ರ ಯೋಜನೆ ಮತ್ತು ಪ್ರದೇಶಾಧಾರಿತ ಅಭಿವೃದ್ಧಿಯ ದೃಷ್ಟಿಕೋನವನ್ನು ಪಿಎಂ ಗತಿಶಕ್ತಿ ಸಾಕಾರಗೊಳಿಸುತ್ತಿದೆ ಎಂದರು.

**ಧ್ವನಿ : ಪಿಯೂಷ್ ಗೋಯಲ್ ( 33 ಸೆಕೆಂಡುಗಳು)**

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ ಮಾತನಾಡಿ, ಈ ಉಪಕ್ರಮವು ೧೬ ಇಲಾಖೆಗಳಿಂದ ೫೬ ಇಲಾಖೆಗಳಿಗೆ ವಿಸ್ತರಿಸಿದ್ದು, ಸಚಿವಾಲಯಗಳು ಮತ್ತು ರಾಜ್ಯಗಳಲ್ಲಿ ಸಮನ್ವಯವನ್ನು ಬಲಪಡಿಸುತ್ತಿದೆ ಎಂದು ಹೇಳಿದರು.

**************

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಇಂದು ಪುದುಚೇರಿಯಲ್ಲಿ ೨ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಮೂರು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಮಾಡಿದರು. ೧ ಸಾವಿರದ ೫೮೮ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ರಾಷ್ಟ್ರೀಯ ಹೆದ್ದಾರಿ-೩೨ ರ ૩೮ ಕಿಲೋಮೀಟರ್ ಉದ್ದದ ನಾಲ್ಕು ಪಥಗಳ ಪುದುಚೇರಿ-ಪೂಂಡಿಯಂಕುಪ್ಪಂ ವಿಭಾಗವನ್ನು ಸಚಿವರು ರಾಷ್ಟ್ರಕ್ಕೆ ಅರ್ಪಿಸಿದರು. ಇದೇ ವೇಳೆ ರಾಷ್ಟ್ರೀಯ ಹೆದ್ದಾರಿ-೩೨ ರ ಇಂದಿರಾ ಗಾಂಧಿ ಚೌಕ ಮತ್ತು ರಾಜೀವ್ ಗಾಂಧಿ ಚೌಕದ ನಡುವೆ ೪೩೬ ಕೋಟಿ ರೂಪಾಯಿ ವೆಚ್ಚದಲ್ಲಿ ೩.೮೮ ಕಿಲೋಮೀಟರ್ ಎತ್ತರದ ಕಾರಿಡಾರ್ ನಿರ್ಮಾಣಕ್ಕೂ ಅವರು ಶಂಕುಸ್ಥಾಪನೆ ನೆರವೇರಿಸಿದರು. ಜೊತೆಗೆ, ೨೫ ಕೋಟಿ ರೂಪಾಯಿ ಹೂಡಿಕೆಯೊಂದಿಗೆ ಪೂರ್ವ ಕರಾವಳಿ ರಸ್ತೆಯ ೧೩.೯೩ ಕಿಲೋಮೀಟರ್ ಉದ್ದದ ಸುಧಾರಣಾ ಕಾರ್ಯಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

**************

ಕಳೆದ ವರ್ಷ ಜಾರಿಗೆ ತಂದ ಮೂರು ಐತಿಹಾಸಿಕ ಕ್ರಿಮಿನಲ್ ಕಾನೂನುಗಳು ನ್ಯಾಯಾಂಗ ವ್ಯವಸ್ಥೆಯನ್ನು ವೇಗ, ಸರಳ ಮತ್ತು ಹೆಚ್ಚು ಸುಲಭವಾಗಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಹೊಸ ಕ್ರಿಮಿನಲ್ ಕಾನೂನುಗಳ ಅನುಷ್ಠಾನದ ಒಂದು ವರ್ಷವನ್ನು ಗುರುತಿಸುವ ರಾಜ್ಯಮಟ್ಟದ ಪ್ರದರ್ಶನವನ್ನು ಇಂದು ಜೈಪುರದಲ್ಲಿ ಉದ್ಘಾಟಿಸಿ ಮಾತನಾಡಿದ ಅವರು, ನ್ಯಾಯದ ಸುಲಭತೆಯನ್ನು ಖಚಿತಪಡಿಸಿಕೊಳ್ಳುವತ್ತ ಈ ಕಾನೂನುಗಳು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದರು. ನಾಗರಿಕರು ತಮ್ಮ ದೈನಂದಿನ ಜೀವನದಲ್ಲಿ ಸ್ವದೇಶಿ ನೀತಿಯನ್ನು ಅಳವಡಿಸಿಕೊಳ್ಳುವ ಪ್ರತಿಜ್ಞೆಯನ್ನು ತೆಗೆದುಕೊಳ್ಳುವಂತೆ ಇದೇ ವೇಳೆ ಸಚಿವ ಅಮಿತ್ ಶಾ ಒತ್ತಾಯಿಸಿದರು. ಭಾರತದಲ್ಲಿ ತಯಾರಿಸಿದ ಉತ್ಪನ್ನಗಳನ್ನು ಮಾತ್ರ ಬಳಸುವುದರಿಂದ ದೇಶೀಯ ಉತ್ಪಾದನೆ ಹೆಚ್ಚಾಗುತ್ತದೆ. ಇದು ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶವಾಗುವ ರಾಷ್ಟ್ರದ ಸಂಕಲ್ಪವನ್ನು ಈಡೇರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಹೇಳಿದರು.

**************

ಕದನ ವಿರಾಮ ಒಪ್ಪಂದದ ಮೊದಲ ಹಂತದ ಭಾಗವಾಗಿ ಹಮಾಸ್, ಗಾಜಾದಲ್ಲಿರುವ ಎಲ್ಲಾ ೨೦ ಒತ್ತೆಯಾಳುಗಳನ್ನು ಇಸ್ರೇಲ್‌ಗೆ ಹಸ್ತಾಂತರಿಸಿದೆ. ಒತ್ತೆಯಾಳುಗಳಿಗೆ ಪ್ರತಿಯಾಗಿ, ಇಸ್ರೇಲ್ ಸುಮಾರು ಎರಡು ಸಾವಿರ ಪ್ಯಾಲೆಸ್ತೀನಿಯನ್ನರನ್ನು ಬಿಡುಗಡೆ ಮಾಡಲಿದೆ. ಅಮೆರಿಕದ ಮಿಲಿಟರಿಯ ಮೇಲ್ವಿಚಾರಣೆಯಲ್ಲಿ ಸುಮಾರು ೨೦೦ ಸೈನಿಕರ ಪಡೆ ಕದನ ವಿರಾಮವನ್ನು ಮೇಲ್ವಿಚಾರಣೆ ಮಾಡುತ್ತದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಂದು ಟೆಲ್ ಅವೀವ್‌ಗೆ ಬಂದಿಳಿದಿದ್ದಾರೆ. ಅಲ್ಲಿ ಅವರು ಇಸ್ರೇಲಿ ಒತ್ತೆಯಾಳುಗಳ ಕುಟುಂಬಗಳನ್ನು ಭೇಟಿ ಮಾಡಲಿದ್ದಾರೆ. ನಂತರ ಇಸ್ರೇಲ್ ಸಂಸತ್ತು

ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಅವರು ಗಾಜಾ ಕುರಿತ ಶರ್ಮ್ ಎಲ್-ಶೇಖ್ ಶಾಂತಿ ಶೃಂಗಸಭೆಯಲ್ಲಿ ಭಾಗವಹಿಸಲು ಈಜಿಪ್ಟ್‌ಗೆ ತೆರಳಲಿದ್ದಾರೆ. ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಮತ್ತು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಸೇರಿದಂತೆ ೨೦ ಕ್ಕೂ ಹೆಚ್ಚು ದೇಶಗಳ ನಾಯಕರು ಶೃಂಗಸಭೆಯಲ್ಲಿ ಸೇರಲಿದ್ದಾರೆ.

**************

ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ಪ್ರಾದೇಶಿಕ ಸಮಿತಿಯ ೭೮ ನೇ ಅಧಿವೇಶನ ಇಂದು ಕೊಲಂಬೊದಲ್ಲಿ ಪ್ರಾರಂಭವಾಯಿತು. ಕೇಂದ್ರ ಆರೋಗ್ಯ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ನಾಳೆ ನಡೆಯುವ ಸಮಗ್ರ ಅಧಿವೇಶನದಲ್ಲಿ ಭಾಗವಹಿಸಲು ಇಂದು ಕೊಲಂಬೊಗೆ ಆಗಮಿಸಲಿದ್ದಾರೆ. ದಕ್ಷಿಣ ಮತ್ತು ಆಗ್ನೇಯ ಏಷ್ಯಾದಲ್ಲಿ ಪ್ರಾದೇಶಿಕ ಆರೋಗ್ಯ ಸಹಕಾರವನ್ನು ಮುನ್ನಡೆಸುವಲ್ಲಿ ಹಾಗೂ ಸಾಮೂಹಿಕ ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಬಲಪಡಿಸುವಲ್ಲಿ ಭಾರತದ ಸಕ್ರಿಯ ಪಾತ್ರದ ಕುರಿತು ಅವರು ಪ್ರಸ್ತಾಪಿಸಲಿದ್ದಾರೆ.

**************

ಏಷ್ಯಾದ ಅತಿದೊಡ್ಡ ಮತ್ತು ವಿಶ್ವದ ಎರಡನೇ ಅತಿದೊಡ್ಡ ರೈಲ್ವೆ ಪ್ರದರ್ಶನವಾದ ೧೬ನೇ ಅಂತಾರಾಷ್ಟ್ರೀಯ ರೈಲ್ವೆ ಸಲಕರಣೆಗಳ ಪ್ರದರ್ಶನವು ಅಕ್ಟೋಬರ್ ೧೫ ರಿಂದ ೧೭ ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿದೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಬುಧವಾರ ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ೧೫ ಕ್ಕೂ ಹೆಚ್ಚು ದೇಶಗಳಲ್ಲಿ ೪೫೦ ಕ್ಕೂ ಹೆಚ್ಚು ಪ್ರದರ್ಶಕರು ೩೦ ಸಾವಿರಕ್ಕೂ ಹೆಚ್ಚು ಅತ್ಯಾಧುನಿಕ ರೈಲ್ವೆ ಮತ್ತು ಮೆಟ್ರೋ ಉತ್ಪನ್ನಗಳು, ನಾವೀನ್ಯತೆಗಳು ಮತ್ತು ಸುಸ್ಥಿರ ಪರಿಹಾರಗಳನ್ನು ಪ್ರದರ್ಶಿಸಲಿದ್ದಾರೆ. ಎರಡು

ದಿನಗಳ ಈ ಕಾರ್ಯಕ್ರಮವನ್ನು ಭಾರತೀಯ ಕೈಗಾರಿಕಾ ಒಕ್ಕೂಟ, ಸಿಐಐ ರೈಲ್ವೆ ಸಚಿವಾಲಯದ ಸಹಯೋಗದೊಂದಿಗೆ ಆಯೋಜಿಸಲಿದೆ.

**************

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ವೆಸ್ಟ್ ಇಂಡೀಸ್ ತಂಡದ ವಿರುದ್ಧದ ಟೆಸ್ಟ್ ಕ್ರಿಕೆಟ್ ಪಂದ್ಯದ ನಾಲ್ಕನೇ ದಿನದಾಟದ ಅಂತ್ಯದಲ್ಲಿ ಭಾರತ ೧ ವಿಕೆಟ್ ನಷ್ಟಕ್ಕೆ ೬೩ ರನ್ ಮಾಡಿದೆ. ನಾಳೆ ಅಂತಿಮ ದಿನದಾಟ ಮುಂದುವರಿಯಲಿದೆ. ಗೆಲುವಿಗಾಗಿ ಭಾರತ ತಂಡಕ್ಕೆ ೫೮ ರನ್‌ಗಳ ಅಗತ್ಯವಿದೆ.

*****END*****